# Akashvani : Bangalore
# Regional Bulletin In Kannada
# 21.07.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**21.07.2025 / 18.40  hrs**

**<><*<><>*><>**

<u>ಮುಖ್ಯಾಂಶಗಳು</u>

- ಪಾವಗಡ ತಾಲೂಕಿನ ಒಂದು ಸಾವಿರದ ೧೬೧ ಹಳ್ಳಿಗಳಿಗೆ ಕುಡಿಯುವ ನೀರು ಪೂರೈಕೆ ಯೋಜನೆಗೆ ಮುಖ್ಯಮಂತ್ರಿ ಚಾಲನೆ

- ಆಗಸ್ಟ್ ೧೧ ರಿಂದ ರಾಜ್ಯ ವಿಧಾನಸಭೆ ಮುಂಗಾರು ಅಧಿವೇಶನ

- ಧರ್ಮಸ್ಥಳ ಪ್ರಕರಣ; ಸೂಕ್ತ ತನಿಖೆಗೆ ಪ್ರತಿಪಕ್ಷ ಬಿಜೆಪಿ ಆಗ್ರಹ

- ಗೃಹ ಆರೋಗ್ಯ ಯೋಜನೆಯ ಮೂಲಕ ಜನಸಾಮಾನ್ಯರ ಮನೆ ಬಾಗಿಲಿಗೆ ಆರೋಗ್ಯ ಸೇವೆ

**<><*<><>*><>**

ಬರಪೀಡಿತ ಪಾವಗಡ ತಾಲೂಕಿನ ಬೇಡಿಕೆಯಾಗಿದ್ದ ತುಂಗಭದ್ರಾ ಜಲಾಶಯದಿಂದ ತಾಲೂಕಿನ ೧ ಸಾವಿರದ ೧೬೧ ಹಳ್ಳಿಗಳಿಗೆ ಕುಡಿಯುವ ನೀರು ಪೂರೈಕೆ ಯೋಜನೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಿದರು. ಪಾವಗಡದ ರಾಜೀವ್ ಗಾಂಧಿ ಕ್ರೀಡಾಂಗಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ೨ ಸಾವಿರ ೩೫೦ ಕೋಟಿ ವೆಚ್ಚದ ಕುಡಿಯುವ ನೀರು ಯೋಜನೆ, ೧೨ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಸೋಲಾರ್ ಪಾರ್ಕ್ ಸ್ಥಾಪನೆ ಹಾಗೂ ಪಾವಗಡ ವಿಧಾನಸಭಾ ಕ್ಷೇತ್ರದ ೭೧೬ ಕೋಟಿ ಮೊತ್ತದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೇರವೇರಿಸಿದರು. ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದ ಸರ್ವತೋಮುಖ ಅಭಿವೃದ್ಧಿಯೇ ಸರ್ಕಾರದ ಧ್ಯೇಯವಾಗಿದೆ. ರಾಜ್ಯದ ೨೨೪ ತಾಲೂಕುಗಳ ಅಭಿವೃದ್ಧಿಗೆ ಸರ್ಕಾರ ಬದ್ಧವಾಗಿದೆ. ಭದ್ರಾ ಮೇಲ್ದಂಡೆ ಮತ್ತು ಎತ್ತಿನ ಹೊಳೆ ಯೋಜನೆಯಿಂದ ಪಾವಗಡ ತಾಲೂಕಿನ ಕೆರೆಗಳನ್ನು ತುಂಬಿಸಲು ಕ್ರಮವಹಿಸಲಾಗುವುದು ಎಂದು ಹೇಳಿದರು. ಗೃಹ ಸಚಿವ ಡಾ. ಜಿ.ಪರಮೇಶ್ವರ್ ಮಾತನಾಡಿ, ಪಾವಗಡ ತಾಲೂಕಿಗೆ ಶಾಶ್ವತ ಕುಡಿಯುವ ನೀರಿನ ಯೋಜನೆಗೆ ೨೦೧೩ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ೨ ಸಾವಿರದ ೫೦೦ ಕೋಟಿ ಅನುದಾನ

ನೀಡಿದ್ದರು. ೨೦೦ ಕಿಲೋ ಮೀಟರ್ ದೂರದಿಂದ ಕುಡಿಯುವ ನೀರನ್ನು ತಾಲೂಕಿಗೆ ಹರಿಸಲಾಗಿದೆ ಎಂದರು.

**<><*<><>*><>**

ಕರ್ನಾಟಕ ವಿಧಾನಸಭೆ ಮುಂಗಾರು ಅಧಿವೇಶನ ಆಗಸ್ಟ್ ೧೧ ರಿಂದ ೨೨ ರ ವರೆಗೆ ನಡೆಯಲಿದೆ. ಆಗಸ್ಟ್ ೧೧ ರ ಬೆಳಗ್ಗೆ ೧೧ ಗಂಟೆಗೆ ಅಧಿವೇಶನ ಆರಂಭಗೊಳ್ಳಲಿದೆ ಎಂದು ವಿಧಾನಸಭೆ ಅಧ್ಯಕ್ಷ ಯು.ಟಿ.ಖಾದರ್ ತಿಳಿಸಿದ್ದಾರೆ. ಮಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಗತ್ಯಬಿದ್ದರೆ ಅಧಿವೇಶನ ಅವಧಿ ವಿಸ್ತರಣೆ ಕುರಿತು ಮುಖ್ಯಮಂತ್ರಿ, ಪ್ರತಿಪಕ್ಷ ನಾಯಕರು ಒಳಗೊಂಡಿರುವ ಸಲಹಾ ಸಮಿತಿ ಅಂತಿಮ ತೀರ್ಮಾನ ಕೈಗೊಳ್ಳುತ್ತದೆ ಎಂದರು. ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣಗಳಿಗೆ ಸಂಬಂಧಿಸಿ ಸರ್ಕಾರ ಈಗಾಗಲೇ ವಿಶೇಷ ತನಿಖಾ ತಂಡ ರಚಿಸಿ ಆದೇಶ ಹೊರಡಿಸಿದೆ. ತನಿಖೆ ನಡೆದು ಸತ್ಯಾಂಶ ಹೊರಬರಲಿ. ತನಿಖೆಗೆ ಮೊದಲೇ ಪೂರ್ವಾಗ್ರಹದ ತೀರ್ಮಾನ ಸರಿಯಲ್ಲ ಎಂದು ಅವರು ಹೇಳಿದರು. ಒಂದು ಕ್ಷೇತ್ರದ ಪಾವಿತ್ರ್ಯಕ್ಕೆ ಧಕ್ಕೆಯಾಗುವಂತಹ ಕೆಲಸ ನಡೆಯಬಾರದು. ಒಂದು ಸಂಸ್ಥೆಯನ್ನು ಕಟ್ಟಲು ಕಷ್ಟವಿದೆ. ಅದರ ವಿವಿಧ ಸಂಸ್ಥೆಗಳನ್ನು ಅವಲಂಬಿಸಿ ಅನೇಕ ಜನರ ಕುಟುಂಬಗಳಿರುತ್ತವೆ. ಸಮರ್ಪಕ ತನಿಖೆ ನಡೆದು ತಪ್ಪಿತಸ್ಥರು ಯಾರೇ ಇದ್ದರೂ, ಅವರ ವಿರುದ್ಧ ಕ್ರಮವಾಗಲಿ. ಅಲ್ಲಿಯ ತನಕ ಕಾಯಬೇಕು. ಸಹಕಾರ ನೀಡಬೇಕು ಎಂದು ಯು.ಟಿ.ಖಾದರ್ ಅಭಿಪ್ರಾಯಪಟ್ಟರು.

**<><*<><>*><>**

ಧರ್ಮಸ್ಥಳದ ಬಳಿ ನೂರಾರು ಶವಗಳು ಸಿಕ್ಕಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಎಸ್ಐಟಿ ರಚಿಸಿರುವುದು ಸ್ವಾಗತಾರ್ಹ. ಆದರೆ ಧರ್ಮಸ್ಥಳದ ಮಂಜುನಾಥ ಸ್ವಾಮಿಯ ದೇವಾಲಯದ ಬಗ್ಗೆ ಅಪಪ್ರಚಾರ ಮಾಡುವುದು ತಪ್ಪು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಧರ್ಮಸ್ಥಳ ಭಾಗದಲ್ಲಿ ನೂರಾರು ಶವಗಳನ್ನು ಹೂತು ಹಾಕಿರುವುದಾಗಿ ಅನಾಮಧೇಯ ವ್ಯಕ್ತಿ ಹೇಳಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಎಸ್ಐಟಿ ರಚಿಸಿದೆ. ಈ ಪ್ರಕರಣಗಳಲ್ಲಿ ನಿಷ್ಪಕ್ಷಪಾತವಾದ ತನಿಖೆಯಾಗಲಿ. ಆದರೆ ಯಾರನ್ನೂ ಸಿಕ್ಕಿ ಹಾಕಿಸುವ ಉದ್ದೇಶದಿಂದ ತನಿಖೆ ನಡೆಯಬಾರದು ಎಂದು ಆಗ್ರಹಿಸಿದರು.

**ಧ್ವನಿ : ಆರ್.ಅಶೋಕ್ (೩೪ ಸೆಕೆಂಡುಗಳು)**

**<><*<><>*><>**

ಧರ್ಮಸ್ಥಳ ಪ್ರಕರಣದ ಕುರಿತು ಎಸ್ಐಟಿ ತನಿಖೆಗೆ ನೀಡಿರುವುದನ್ನು ಸ್ವಾಗತ ಮಾಡುತ್ತೇವೆ. ಕಾಲ ಮಿತಿಯಲ್ಲಿ ಕಾನೂಬದ್ಧವಾಗಿ ಎಸ್ಐಟಿ  ತನಿಖೆಯಾಗಬೇಕು. ಯಾರನ್ನೋ ಗುರಿಯಾಗಿಸಿಕೊಂಡು ತನಿಖೆ ನಡೆಯಬಾರದು ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಧರ್ಮಸ್ಥಳದ ಬಗ್ಗೆ ಸ್ಥಳೀಯರು ಹಾಗೂ ಅಲ್ಲಿ ಬಹಳ ದಿನಗಳವರೆಗೆ ಕೆಲಸ ಮಾಡಿರುವ ಪೊಲೀಸರಿಗೆ ಗೊತ್ತಿರುತ್ತದೆ. ದೂರು ನೀಡಿದವರು ತಮ್ಮ ಮೇಲೆ ಒತ್ತಡ ಇದೆ ಎಂದು ಹೇಳಿದ್ದಾರೆ.  ದೂರು ಕೊಟ್ಟವರಿಗೆ ಯಾರು ಒತ್ತಡ ಹಾಕಿದ್ದಾರೆ ಎಂದು ಹೇಳಬೇಕು. ಈ ಬಗ್ಗೆ ತನಿಖೆಯಾಗಬೇಕು. ಅಲ್ಲಿ ನಡೆದಿರುವ ಪ್ರಕರಣದ ಬಗ್ಗೆ ಪೊಲೀಸರು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.  ಸಣ್ಣ ಮತ್ತು ಅತಿ ಸಣ್ಣ ವ್ಯಾಪಾರಸ್ಥರಿಗೆ ವಾಣಿಜ್ಯ ತೆರಿಗೆ ಇಲಾಖೆಯವರು ನೋಟಿಸ್ ನೀಡಿದ್ದು, ಸಣ್ಣ ವ್ಯಾಪಾರಸ್ಥರಿಗೆ ದೊಡ್ಡ ಆಘಾತವಾಗಿದೆ.  ಈಗ ಬಗ್ಗೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೇಂದ್ರದ ಮೇಲೆ ಹೊಣೆ ಹಾಕಿ ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದ್ದಾರೆ. ಇದು ರಾಜ್ಯ ಹಾಗೂ ಕೇಂದ್ರ ಸರ್ಕಾರದ ಜಂಟಿ ಜವಾಬ್ದಾರಿಯಾಗಿದೆ. ರಾಜ್ಯದ ಮೇಲೆ ಹೆಚ್ಚಿನ ಜವಾಬ್ದಾರಿ ಇದೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

**<><*<><>*><>**

ರಾಜ್ಯ ಸರಕಾರದ ಮಹಾತ್ವಾಕಾಂಕ್ಷಿ ಯೋಜನೆಯಾದ ಗೃಹ ಆರೋಗ್ಯ ಯೋಜನೆಯ ಮೂಲಕ ಜನಸಾಮಾನ್ಯರ ಮನೆ ಬಾಗಿಲಿಗೆ ಆರೋಗ್ಯ ಸೇವೆಯನ್ನು ತಲುಪಿಸಿ, ಅಸಾಂಕ್ರಾಮಿಕ ರೋಗಗಳಿಂದ ಉಂಟಾಗುವ ಮರಣ ಪ್ರಮಾಣವನ್ನು ಕಡಿಮೆ ಮಾಡುವ ಗುರಿ ಹೊಂದಲಾಗಿದೆ ಎಂದು ಉಡುಪಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನಕರ ಹೇರೂರು ಹೇಳಿದ್ದಾರೆ. ಉಡುಪಿ ನಗರದ ಮಣಿಪಾಲ ರಜತಾದ್ರಿಯ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿಂದು ನಡೆದ ಗೃಹ ಆರೋಗ್ಯ ಯೋಜನೆಯ ಕಾರ್ಯಾಗಾರ ಉದ್ಘಾಟಿಸಿ, ಆಶಾ ಕೈಪಿಡಿ ಬಿಡುಗಡೆಗೊಳಿಸಿ ಅವರು ಮಾತನಾಡಿದರು. ಗೃಹ ಅರೋಗ್ಯ ಯೋಜನೆ ಕಾರ್ಯಕ್ರಮದಡಿ ವೈದ್ಯರು ಹಾಗೂ ಆಶಾ ಕಾರ್ಯಕರ್ತೆಯರು ಪ್ರತಿ ಮನೆಗೂ ಭೇಟಿ ನೀಡಿ ೩೦ ವರ್ಷ ಮೇಲ್ಪಟ್ಟವರಲ್ಲಿ ಸಕ್ಕರೆ ಕಾಯಿಲೆ, ರಕ್ತದೊತ್ತಡ, ವಿವಿಧ ತರಹದ ಕ್ಯಾನ್ಸರ್, ಮಾನಸಿಕ ಆರೋಗ್ಯ ಸೇರಿದಂತೆ ಮತ್ತಿತರ ರೋಗ ಲಕ್ಷಣವಿರುವವರನ್ನು ತಪಾಸಣೆ ಮಾಡಿ, ಅರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಚಿಕಿತ್ಸೆಗೆ ಒಳಪಡಿಸುತ್ತಾರೆ. ಹೆಚ್ಚಿನ ಚಿಕಿತ್ಸೆಗೆ ಶಿಫಾರಸು ಕೂಡ ಮಾಡಲಿದ್ದಾರೆ ಎಂದರು.

**<><*<><>*><>**

ಸಂಕಷ್ಟ ಕಾಲದಲ್ಲಿ ಕುಟುಂಬ ರಕ್ಷಣೆಗಾಗಿ ಇರುವ ಕೇಂದ್ರ ಸರ್ಕಾರದ ಯೋಜನೆಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಕರ್ನಾಟಕ ಗ್ರಾಮೀಣ ಬ್ಯಾಂಕಿನ ಪ್ರಾದೇಶಿಕ ಕಚೇರಿಯ ವ್ಯವಸ್ಥಾಪಕ ಎಸ್.ಮೇಘ ಹೇಳಿದರು. ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕಿನ ದಶಮಾಪುರ ಗ್ರಾಮ ಪಂಚಾಯಿತಿಯಲ್ಲಿ ಇಂದು ಜರುಗಿದ ಆರ್ಥಿಕ ಸೇರ್ಪಡೆ ಪರಿಪೂರ್ಣತಾ ಅಭಿಯಾನದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಅನಿಶ್ಚಿತತೆಯ ಬದುಕಿನಲ್ಲಿ ಕುಟುಂಬದ ರಕ್ಷಣೆಗೆ ಮೀಸಲಿರುವ ಪ್ರಧಾನಮಂತ್ರಿ ಸುರಕ್ಷಾ ಭಿಮಾ ಯೋಜನೆ ಮತ್ತು ಜೀವನ್ ಜ್ಯೋತಿ ಭೀಮಾ ಯೋಜನೆಗಳಿಗೆ ಎಲ್ಲ ಗ್ರಾಮಸ್ಥರು ನೋಂದಣಿ ಮಾಡಿಕೊಳ್ಳಬೇಕು ಎಂದು ಮನವಿ ಮಾಡಿದರು.

**<><*<><>*><>**

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ಅಂಗನವಾಡಿ ಕೇಂದ್ರದ ಕಟ್ಟಡ, ನೀರಿನ ಶುದ್ದೀಕರಣ ಘಟಕ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಸಚಿವರು, ವಿವಿಧ ಅನುದಾನಗಳಿಂದ ಇಂದು ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ದೇವನಹಳ್ಳಿಯಲ್ಲಿ ಬಾಕಿ ಇರುವ ಕಾಮಗಾರಿಗಳನ್ನು ಆದ್ಯತೆ ಮೇಲೆ ಕೈಗೊಳ್ಳಲಾಗುವುದು ಎಂದು ಹೇಳಿದರು.

**<><*<><>*><>**

ವೀರಶೈವ ಪೀಠಾಚಾರ್ಯರು ಹಾಗೂ ಶಿವಾಚಾರ್ಯರ ಎರಡು ದಿನಗಳ ಶೃಂಗಸಮ್ಮೇಳನ ದಾವಣಗೆರೆಯಲ್ಲಿಂದು ಆರಂಭಗೊಂಡಿದೆ. ಶ್ರೀ ಶೈಲ, ಉಜ್ಜಯಿನಿ, ಕೇದಾರ, ಬಾಳೆಹೊನ್ನೂರು ಮತ್ತು ಕಾಶಿ ಪೀಠದ ಶ್ರೀಗಳು ಸೇರಿದಂತೆ ನಾಡಿನ ವಿವಿಧ ಮಠಗಳ ಪೀಠಾಧಿಪತಿಗಳು ಭಾಗವಹಿಸಿದ್ದಾರೆ. ಸಮ್ಮೇಳನ ಉದ್ದೇಶಿಸಿ ಮಾತನಾಡಿದ ಗಣಿ ಮತ್ತು ತೋಟಗಾರಿಕೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್,

ಮಹಾರಾಷ್ಟ್ರ, ತಮಿಳುನಾಡು, ಆಂಧ್ರಪ್ರದೇಶ, ತೆಲಂಗಾಣ ಸೇರಿ ಹಲವು ರಾಜ್ಯಗಳಿಂದ ಮಠಾಧೀಶರು ಶೃಂಗಕ್ಕೆ ಆಗಮಿಸಿದ್ದು, ಎಲ್ಲರೂ ಪಂಚಪೀಠದ ಗುರುಪರಂಪರೆಯನ್ನು ಮುಂದುವರಿಸಿಕೊಂಡು ಹೋಗುವ ಅಗತ್ಯವಿದೆ ಎಂದು ಹೇಳಿದರು.

**<><*<><>*><>**

**ಇನ್ನು ಹವಾ ವರ್ತಮಾನ,**

ರಾಜ್ಯದ ಉತ್ತರ ಒಳನಾಡಿನಲ್ಲಿ ನೈರುತ್ಯ ಮುಂಗಾರು ಸಕ್ರಿಯವಾಗಿತ್ತು. ಕರಾವಳಿ ಮತ್ತು ದಕ್ಷಿಣ ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹೆಚ್ಚಿನ ಸ್ಥಳಗಳಲ್ಲಿ ಮತ್ತು ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ ಎಂದು ಭಾರತೀಯ ಹವಾಮಾನ ಇಲಾಖೆ ತಿಳಿಸಿದೆ. ರಾಯಚೂರಿನಲ್ಲಿ ಅತೀ ಹೆಚ್ಚು ೧೧ ಸೆಂಟಿಮೀಟರ್ ಮಳೆಯಾಗಿದೆ. ಚಿಕ್ಕಬಳ್ಳಾಪುರ ಜಿಲ್ಲೆಯ ತೊಂಡೆಭಾವಿ ೭, ಹೊನ್ನಾವರ ಮತ್ತು ಗೇರುಸೊಪ್ಪ ತಲಾ ೬ ಸೆಂಟಿ ಮೀಟರ್, ಕುಂದಾಪುರ ಮತ್ತು ಭಾಗಮಂಡಲ ತಲಾ ೫ ಸೆಂಟಿ ಮೀಟರ್, ನಾಪೋಕ್ಲು, ಆಗುಂಬೆ, ಮಂಗಳೂರು, ಬಾದಾಮಿ, ವಿಜಯಪುರ, ಮಂಕಿ, ಶಕ್ತಿನಗರ ಮತ್ತು ಕೋಟಾದಲ್ಲಿ ತಲಾ ೪ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ಮೂರು ದಿನಗಳಲ್ಲಿ ರಾಜ್ಯದ ಕೆಲವು ಸ್ಥಳಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ. ಇಂದು ಮತ್ತು ನಾಳೆ ರಾಜ್ಯದ ಕರಾವಳಿಯಲ್ಲಿ ೫೦ರಿಂದ ೬೦ ಕಿಲೋ ಮೀಟರ್ ವೇಗದಲ್ಲಿ ಬಿರುಗಾಳಿ ಬೀಸುವ ಸಾಧ್ಯತೆ ಇದ್ದು, ಈ ಅವಧಿಯಲ್ಲಿ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಸೂಚಿಸಲಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಸಾಧಾರಣ ಮಳೆಯಾಗುವ ಸಂಭವ. ಗರಿಷ್ಠ ತಾಪಮಾನ ೨೮ ಮತ್ತು ಕನಿಷ್ಠ ತಾಪಮಾನ ೨೦ ಡಿಗ್ರಿ ಸೆಲ್ಸಿಯಸ್ ಸಂಭವ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**